# ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ಕಾರ್ಯಾಲಯ, ಗುಬ್ಬಿ

## ದಿನಾಂಕಃ24.07.2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

| | |
|---|---|
| ಸಾಕ್ಷಿದಾರರ ಹೆಸರು<br>ವರ್ಷ<br>ಕೆಲಸ<br>ವಾಸ್ತವ್ಯ | ಲಲಿತಮ್ಮ ಕೋಂ ದೊಡ್ಡಬಸಪ್ಪ<br>73 ವರ್ಷ<br>ವ್ಯವಸಾಯ<br>ಬೆಣಚಿಗೆರೆ |
| | **ಸತ್ಯ ಪ್ರತಿಜ್ಞೆಯ ಮೇರೆಗೆ** |

ಪಾಟೀ ಸವಾಲುಃ- ವಾದಿಗಳ ಪರ ವಕೀಲರಾದ
ಶ್ರೀ. ಎಸ್.ಆರ್. ರವರಿಂದ

ದಾವಾಸ್ವತ್ತಿನ ಸ.ನಂಃ ನನಗೆ ಗೊತ್ತಿಲ್ಲ. ವಾದಿ ನನ್ನ ಮಗಳು. ನನಗೆ 6 ಜನ ಮಕ್ಕಳು. ಅವರುಗಳೆಂದರೆ ಶಿವಗಂಗ , ಗಿರಿಜ , ಪಂಕಜ , ಲೀಲ , ಸುಜಾತ , ಪ್ರೇಮ . ದಾವಾಸ್ವತ್ತು ನನ್ನ ಗಂಡನ ತಂದೆಯ ಆಸ್ತಿ ಎಂದರೆ ಸರಿ. ದಾವಾಸ್ವತ್ತಿನಲ್ಲಿ ವಾದಿ ಹಾಗೂ ಪ್ರತಿವಾದಿಗಳಿಗೆ ಭಾಗಾಂಶದ ಹಕ್ಕು ಇದೆ ಎಂದರೆ ಸರಿ. ದಾವಾಸ್ವತ್ತಲ್ಲದೇ ನಮ್ಮ ಕುಟುಂಬಕ್ಕೆ ಸೇರಿದ ಇನ್ನು ಹಲವು ಆಸ್ತಿಗಳು ಇದ್ದವು ಎಂದರೆ ಸರಿ. ನಾನು , ನನ್ನ ಗಂಡ , ವಾದಿ ಹಾಗೂ ಎಲ್ಲಾ ಪ್ರತಿವಾದಿಗಳು ಸೇರಿ ನಮ್ಮ ಇತರೆ ಆಸ್ತಿಗಳನ್ನು ಮಾರಾಟ ಮಾಡಿದ್ದೇವೆ ಎಂದರೆ ಸರಿ. ದಾವಾಸ್ವತ್ತನ್ನು ವಾದಿಗೆ ಗೊತ್ತಿಲ್ಲದ ಹಾಗೇ ನಾವು ಪ್ರತಿವಾದಿ 7 ರವರಿಗೆ ಮಾರಾಟ ಮಾಡಿದ್ದೇವೆ ಎಂದರೆ ಸರಿಯಲ್ಲ. ದಾವಾಸ್ವತ್ತು ಒಂದೇ ಉಳಿದಿರುವ ಪಿತ್ರಾರ್ಜಿತ ಆಸ್ತಿ ಎಂದರೆ ಸರಿ. ವಾದಿಗೆ ದಾವಾಸ್ವತ್ತಿನಲ್ಲಿ ಭಾಗ ಕೊಡಬೇಕಾಗುತ್ತದೆ ಎಂದು ಹೇಳಿ ಆಕೆಗೆ ಮೋಸ ಮಾಡುವ ಉದ್ದೇಶದಿಂದ ದಾವಾಸ್ವತ್ತು 7 ಅನ್ನು ಪ್ರತಿವಾದಿಗೆ ಮಾರಾಟ ಮಾಡಿದ್ದೇವೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರಿದು ನಾನು ನನ್ನ ಮಕ್ಕಳ ಮದುವೆ ಮಾಡಲು ಮಾಡಿದ ಸಾಲವನ್ನು ತೀರಿಸಲು ದಾವಾಸ್ವತ್ತನ್ನು ಮಾರಾಟ ಮಾಡಿದ್ದೇನೆ. ನಾನು ಮಕ್ಕಳ ಮದುವೆಗೆಂದು ಸಾಲ ಮಾಡದೇ ಇದ್ದರೂ ಕೂಡ ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಯಾರ ಬಳಿ ಸಾಲ ಮಾಡಿದ್ದೇನೆ ಎಂದು ನನಗೆ ಗೊತ್ತಿಲ್ಲ. ಸಾಲ ಮಾಡಿದ ಬಗ್ಗೆ ನಾನು ಯಾವುದೇ ದಾಖಲೆಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿ.

ದಾವಾಸ್ವತ್ತನ್ನು ಮಾರಾಟ ಮಾಡಲು ಮೌಖಿಕವಾಗಿ ಒಪ್ಪಿಗೆ ನೀಡಿದ್ದಳು ಎಂದು ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾಸ್ವತ್ತಿನಲ್ಲಿ ವಾದಿಗೆ ಭಾಗಾಂಶ ಇರುವುದರಿಂದ ಪ್ರತಿವಾದಿ 7 ರವರಿಗೆ ಬರೆದುಕೊಟ್ಟಿರುವ ಕ್ರಯಪತ್ರ ವಾದಿಯ ಭಾಗಕ್ಕೆ ಭಾಧ್ಯ ಪಡಿಸುವುದಿಲ್ಲ ಎಂದರೆ ಸರಿಯಲ್ಲ. ನನ್ನ ಮುಖ್ಯವಿಚಾರಣೆಯ ಪ್ರಮಾಣಪತ್ರದಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ ಎಂದರೆ ಸರಿ ವಾದಿಗೆ ಮೋಸ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ .**

ಓ . ಹೇ. ಕೇ. ಸರಿ. ಇದೆ

ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ.,
ಗುಬ್ಬಿ

B/C present.

Dw1 present. She is cross examined by plaintiff counsel

D7 counsel prays time to lead evidence. Call on.17.08.2024.

Prl.C.J and JMFC, Gubbi.